ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 48 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 09.12.2024 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಪ್ರಶ್ನೆ | ಉತ್ತರ |
|---|---|
| (ಅ) ರಾಜ್ಯದಲ್ಲಿ ಎಷ್ಟು ಕೌಶಲ್ಯ ಅಭಿವೃದ್ಧಿ ಉದ್ಯಮಶೀಲತೆ ಕೇಂದ್ರಗಳು ಜೀವನೋಪಾಯಕ್ಕಾಗಿ ಸ್ಥಾಪಿತವಾಗಿವೆ; (ಅವುಗಳ ವಿವರ ನೀಡುವುದು) | ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ಉದ್ಯಮಶೀಲತಾ ತರಬೇತಿಗಳನ್ನು ಸರ್ಕಾರಿ ಸಂಸ್ಥೆಗಳಾದ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್) ಮೂಲಕ ಕೈಗೊಳ್ಳಲಾಗುತ್ತಿದೆ. ಮುಂದುವರೆದು, ನಿಗಮವು ಸರ್ಕಾರದಿಂದ ಒದಗಿಸಲಾದ ಅನುದಾನವನ್ನು ಬಳಸಿಕೊಂಡು ಸರ್ಕಾರಿ ಸಂಸ್ಥೆಗಳಾದ ಐ.ಟಿ.ಐ., ಜಿ.ಟಿ.ಟಿ.ಸಿ, ಕೆ.ಜಿ.ಟಿ.ಟಿ.ಐ, ಸಿಡಾಕ್ ಮತ್ತು ಮೋಕ್ಷಗೊಂಡಂ ತರಬೇತಿ ಸಂಸ್ಥೆಗಳು ಹಾಗೂ ಕೌಶಲ್‌ಕರ್ ಪೋರ್ಟಲ್‌ನಲ್ಲಿ ಮಾನ್ಯತೆ ಪಡೆದ ಖಾಸಗಿ ತರಬೇತಿ ಸಂಸ್ಥೆಗಳ ಮೂಲಕ ಅಲ್ಪಾವಧಿ ತರಬೇತಿಗಳನ್ನು ಕೈಗೊಳ್ಳಲಾಗುತ್ತಿದೆ. |
| (ಆ) ಸರ್ಕಾರಿ ನಿರುದ್ಯೋಗಿ ವಿದ್ಯಾರ್ಥಿಗಳಿಗೆ ಅನುಕೂಲವಾಗಲೆಂದು ಕೌಶಲ್ಯ ಅಭಿವೃದ್ಧಿ ತರಬೇತಿ ಕೇಂದ್ರ ಸ್ಥಾಪನೆ ಮಾಡಲು ತೆಗೆದುಕೊಂಡ ಯೋಜನೆ ಸ್ವಾಗತಾರ್ಹವಾಗಿದ್ದು, ಈ ಕೇಂದ್ರಗಳು ಪ್ರಸ್ತುತ ಎಷ್ಟು ಪ್ರಾರಂಭದ ಸ್ಥಿತಿಯಲ್ಲಿವೆ ಮತ್ತು ಎಷ್ಟು ಕೌಶಲ್ಯ ಅಭಿವೃದ್ಧಿ ಕೇಂದ್ರಗಳನ್ನು ಪ್ರಾರಂಭ ಮಾಡುವ ಯೋಜನೆ ಸರ್ಕಾರದ ಮುಂದಿದೆ; | ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ಬರುವ ಸರ್ಕಾರಿ ಸಂಸ್ಥೆಗಳನ್ನೊಳಗೊಂಡಂತೆ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ಮಾನ್ಯತೆ ಪಡೆದ 390 ತರಬೇತಿದಾರ ಸಂಸ್ಥೆಗಳ 838 ತರಬೇತಿ ಕೇಂದ್ರಗಳ ಮುಖೇನ ಉಚಿತ ಕೌಶಲ್ಯಾಧಾರಿತ ತರಬೇತಿ ನೀಡಲಾಗುತ್ತಿದೆ. |
| (ಇ) ಈ ಕೇಂದ್ರಗಳನ್ನು ತಾಲ್ಲೂಕು ಕೇಂದ್ರಗಳಲ್ಲಿ ಪ್ರಾರಂಭಿಸಬೇಕೆನ್ನುವ ಯೋಜನೆ ಇರುವುದು ನಿಜವೇ; ಹಾಗಿದ್ದಲ್ಲಿ ಇನ್ನುಳಿದ ತಾಲ್ಲೂಕುಗಳಲ್ಲಿ ಈ ಕೇಂದ್ರಗಳನ್ನು ಯಾವಾಗ ಪ್ರಾರಂಭಿಸುವುದು? (ವಿವರ ನೀಡುವುದು) | ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: ಕೌಉಜೀಇ 12 ಕೌಗುಪ್ರ 2024

(ಡಾ. ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು.